KAUK910003092025



**ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ,**

**ಸಿದ್ದಾಪುರ**

**ಸಿ.ಸಿ ನಂ.130/2025**

ಫಿರ್ಯಾದಿಃ **ಸೆಂಟ್ ಮಿಲಾಗ್ರಿಸ್ ಕ್ರೆಡಿಟ್ ಸೌಹಾರ್ದ ಕೋ-ಆಪರೇಟಿವ್ ಲಿಮಿಟೆಡ್, ಕಾರವಾರ, ಸಿದ್ದಾಪುರ ಶಾಖೆ**

-ವಿರುದ್ಧ-

ಆರೋಪಿಃ **ಶ್ರೀ .ಜಾಫರ್ ಸಾಧೀಕ್ ರಹೀಮ್ ಸಾಬ,**
**ವಯಸ್ಸುಃ ಪ್ರಯಾಪ್ತ, ಉದ್ಯೋಗಃ ವ್ಯಾಪಾರ,**
**ವಾಸಃ ಹಾರ್ಸಿ ಕಟ್ಟಾ, ಸಿದ್ದಾಪುರ ತಾಲೂಕು. ಉ,ಕ.,**

**ದಂಡ ಪ್ರಕಿಯಾ ಸಂಹಿತೆ ಕಲಂ 313 ರಡಿ ಆರೋಪಿಯ ಹೇಳಿಕೆ**

**ಪ್ರಶ್ನೆಃ1** ನ್ಯಾಯಾಲಯದ ಮುಂದೆ ಅಭಿಯೋಜನೆಯ ಪರವಾಗಿ ನಡೆದ ವಿಚಾರಣೆಯಲ್ಲಿ ಸಾಕ್ಷಿದಾರರ ಹೇಳಿಕೆಗಳನ್ನು ಕೇಳಿದ್ದೀಯಾ?

**ಉತ್ತರಃ-**

**ಪ್ರಶ್ನೆಃ** 2. **ಪಿಡಬ್ಲುಃ 1 ಉಲ್ಲಾಸ.ಪಿ.ಶೇಟ್** ಅವರು ತಮ್ಮ ಸಾಕ್ಷ್ಯದಲ್ಲಿ ಹೇಳಿದ್ದೇನೆಂದರೆ, ನ್ಯಾಯಾಲಯದ ವ್ಯಾಪ್ತಿಯಲ್ಲಿರುವ ಫಿರ್ಯಾದುದಾರರು ಸೆಂಟ್ ಮಿಲಾಗ್ರೀಸ್ ಕ್ರೆಡಿಟ್ ಸೌಹಾರ್ದ ಕೋ-ಆಪರೇಟಿವ್ ಲಿಮಿಟೆಡ್, ಸಂಸ್ಥೆಯು, ಕರ್ನಾಟಕ ಸೌಹಾರ್ದಾ ಕೋ-ಆಪರೇಟಿವ್ ಕಾಯ್ದೆ ರಡಿಯಲ್ಲಿ ನೊಂದಾಯಿತ ಸಂಸ್ಥೆಯಾಗಿದ್ದು ಹಣಕಾಸು ವ್ಯವಹಾರ, ಅಗತ್ಯವಿರುವವರಿಗೆ ಹಣವನ್ನು ಸಾಲವಾಗಿ ನೀಡುವ ಸೌಹಾರ್ದ ಸಹಕಾರಿ ಸಂಸ್ಥೆಯಾಗಿದ್ದು, ಆರೋಪಿತನಾದ ನೀನು ಫಿರ್ಯಾದುದಾರರ ಸಹಕಾರಿ ಸಂಸ್ಥೆಯಲ್ಲಿ ಸಾಲಕ್ಕಾಗಿ ಮನವಿ ಮಾಡಿದ್ದು, ನಂತರ ದಿನಾಂಕ 07.03.2022 ರಂದು ರೂ. 1,85,000/- ಗಳನ್ನು ಸಾಲ ಪಡೆದಿರುತ್ತೀಯಾ ಎಂದು ನುಡಿದಿರುತ್ತಾರೆ ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರಃ-**

**ಪ್ರಶ್ನೆ: 3** ಫ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು, ಸಾಲಕ್ಕಾಗಿ ನೀನು ಎಲ್ಲಾ ದಾಖಲಾತಿ ಮತ್ತು ಆಗ್ರಿಮೆಂಟ್ ಮಾಡಿದ್ದು ಹಾಗೂ ಉಮಾಪತಿ ಮಹಾಬಲೇಶ್ವರ ಮತ್ತು ಶ್ರೀ ಮುಸಾಧೀಕ್ ಅಬ್ದುಲ್ ಸಾಬ ಎನ್ನುವವರನ್ನು ಶ್ಯೂರಟೀಯಾಗಿಸಿದ್ದು, ಆರೋಪಿತನಾದ ನೀನು ಸಾಲದ ಕಂತುಗಳನ್ನು ಸರಿಯಾಗಿ ಪಾವತಿ ಮಾಡದೆ ಇದ್ದು, ಸದರಿ ಸಾಲದ ಈಗಿನ ಬಾಕಿ ಮೊತ್ತವು ರೂ.1,99,678/- ಆಗಿದ್ದು ಹಾಗೂ ಫಿರ್ಯಾದುದಾರರ ಸಂಸ್ಥೆಯು ಹಲವು ಬಾರಿ ಸಾಲದ ಮರುಪಾವತಿಗಾಗಿ ಬೇಡಿಕೆ ಇಟ್ಟಿದ್ದು, ಸದರಿ ಸಾಲದ ಬಾಬ್ತಿಗಾಗಿ ದಿನಾಂಕ 06.03.2025 ಕೆನರಾ ಬ್ಯಾಂಕ್, ಸಿದ್ದಾಪುರ ಶಾಖೆಯ ಚೆಕ್ಕಿನ ಸಂಖ್ಯೆ 259901 ನ ರೂ.1,99,678/- ನ ಚೆಕನ್ನು ಪಿರ್ಯಾದುದಾರರಿಗೆ ನೀಡಿರುತ್ತೀಯಾ ಎಂದು ಸಾಕ್ಷ್ಯ ನುಡಿದಿರುತ್ತಾರೆ ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರಃ-**

**ಪ್ರಶ್ನೆ: 4.** ಫ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು, ತದನಂತರ ಸಹಕಾರಿ ಸಂಸ್ಥೆಯು ಸದರಿ ಚೆಕನ್ನು ನಗದು ಗೊಳಿಸಲು ಕೆ.ಡಿ.ಸಿ.ಸಿ ಬ್ಯಾಂಕ್, ಸಿದ್ದಾಪುರ ಶಾಖೆಗೆ ಹಾಕಿದಾಗ ನಿನ್ನ ಖಾತೆಯಲ್ಲಿ ಸಾಕಷ್ಟು ಹಣ ಇರದ ಕಾರಣ ದಿಃ 10.03.2025 ರಂದು "**Funds Insufficient**" ಎಂಬ ಹಿಂಬರಹದೊಂದಿಗೆ ವಾಪಸ್ ಬಂದಿರುವುದಾಗಿ ಮತ್ತು ಸದರಿ ವಿಷಯವನ್ನು ದಿಃ 18.03.2025 ರಂದು ಅವರ ವಕೀಲರ ಮೂಲಕ ನೋಟಿಸ್ಸು ನೀಡಿ ತಿಳಿಸಿರುವುದಾಗಿ, ಸದರಿ ನೋಟಿಸ್ಸುನ್ನು ದಿನಾಂಕ: 25.03.2025 ರಂದು ಪಡೆದಿದ್ದರೂ ನೀನು ಹಣವನ್ನು ಸಹ ಮರುಪಾವತಿ ಮಾಡದೇ **ಏನ್ ಆಯ್ ಆಕ್ಟ, 138** ರ ಅಡಿಯಲ್ಲಿ ಅಫರಾದ ಎಸುಗಿರುವಿರೆಂದು ನಿನ್ನ ಮೇಲೆ ಆರೋಪಣೆ ಇದೆ ಮತ್ತು ಸದ್ರಿ ಆರೋಪಣೆಯನ್ನು ಈ ನ್ಯಾಯಾಲಯದ ಅಧಿಕಾರ ವ್ಯಾಪ್ತಿಯಲ್ಲಿ ಮಾಡಿರುತ್ತೀಯಾ ಎಸುಗಿರುವಿರೆಂದು ಸಾಕ್ಷ್ಯನುಡಿದಿರುತ್ತಾರೆ. ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರಃ-**

**ಪ್ರಶ್ನೆ: 5.** ಫ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು, ಪ್ರಕರಣದ ಕೆಳಗಿನ ದಾಖಲಾತಿಗಳನ್ನು ಗುರುತಿಸಿ ಸಾಕ್ಷ್ಯವನ್ನು ನುಡಿದಿರುತ್ತಾರೆ, ನಾನು ನನ್ನ ಮುಖ್ಯವಿಚಾರಣೆಯಲ್ಲಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ ಎಂದು, ಸಾಕ್ಷಿಯು ದಿಃ 13-05-2022 ರ ಅಧೀಕಾರ ಪತ್ರವನ್ನು ನಿ.ಪಿ-1 ಎಂದು, ದಿಃ 14-10-2008 ರ ನೋಂದಣಿ ಪ್ರಮಾಣ ಪತ್ರವನ್ನು ನಿ.ಪಿ-2 ಎಂದು, ದಿಃ 06-03-

2025ರ ಕೆನರಾ ಬ್ಯಾಂಕ್ ಸಿದ್ದಾಪುರ ಶಾಖೆಯ ಚೆಕ್ ಸಂಖ್ಯೆ 259901 ನ್ನು ಸದರಿ ಚೆಕನ್ನು ನಿ.ಪಿ-3 ಎಂದು, ಆರೋಪಿಯ ಸಹಿಯನ್ನು ನಿ.ಪಿ-3(ಎ) ಎಂದು, ದಿಃ 10-03-2025 ರ ಬ್ಯಾಂಕ್ ರಿಟರ್ನ ಮೆಮೊ ಹಾಜರುಪಡಿಸಿದ್ದು ನಿ.ಪಿ-4 ಎಂದು, ದಿಃ 18-03-2025 ರ ನೋಟೀಸನ್ನು ನಿ.ಪಿ-5 ಎಂದು, ಒಂದು ಅಂಚೆ ರಶೀಧಿಯನ್ನು ನಿ.ಪಿ-6 ಎಂದು, ಅಂಚೆ ಸ್ವೀಕೃತಿ ರಶೀಧಿಯನ್ನು ನಿ.ಪಿ-7 ಎಂದು ಗುರುತಿಸಿ ಸಾಕ್ಷ್ಯವನ್ನು ನುಡಿದಿರುತ್ತಾರೆ, ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರಃ-**

ಪ್ರಶ್ನೆಃ 6. ಈ ಪ್ರಕರಣ ಕುರಿತು ನಿನಗೆ ಇನ್ನು ಏನಾದರೂ ಹೇಳುವುದು ಇದೆಯೇ ?

**ಉತ್ತರಃ**

ಪ್ರಶ್ನೆಃ 7. ನಿನ್ನ ಪರವಾಗಿ ಏನಾದರೂ ಸಾಕ್ಷಿ ಅಥವಾ ದಾಖಲೆಗಳನ್ನು ಹಾಜರುಪಡಿಸುತ್ತೀಯಾ?

**ಉತ್ತರಃ**

ಫಿರ್ಯಾದುದಾರರ ಪರ ಸಾಕ್ಷಿದಾರರ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ದಿನಾಂಕಃ **04-08-2025** ರಂದು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.

**ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ.,ಸಿದ್ದಾಪುರ.**